2 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರವರ ನ್ಯಾಯಾಲಯದಲ್ಲಿ
ಚಿಕ್ಕಮಗಳೂರು

<u>ಸತ್ರ ಮೊಕದ್ದಮೆ ನಂಃ145/2019</u>

| | | | |
|---|---|---|---|
| ಸಾಕ್ಷಿದಾರರ ಹೆಸರು | - | ವೆಂಕಟೇಶ್ | ಪಿಡಬ್ಲೂ-15 |
| ತಂದೆಯ ಹೆಸರು | - | ಅಂಜನಪ್ಪ | ಸಿಡಬ್ಲೂ -6 |
| ವಯಸ್ಸು | - | 49 ವರ್ಷ | |
| ಉದ್ಯೋಗ | - | ವ್ಯವಸಾಯ | |
| ವಾಸ ಸ್ಥಳ | - | ರಾಯಪುರ, ಬಳ್ಳಾರಿ | |

ದಿನಾಂಕಃ 17.09.2022 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

<u>ಮುಖ್ಯ ವಿಚಾರಣೆ : ಸರ್ಕಾರಿ ಅಭಿಯೋಜಕರಿಂದ-</u>

1. ನ್ಯಾಯಾಲಯದಲ್ಲಿ ಹಾಜರಿರುವ ಆರೋಪಿ ಗೊತ್ತಿಲ್ಲ. ಚಾಸಾ.1, 3, 4 ಮತ್ತು ಚಾಸಾ.7 ರವರು ಗೊತ್ತಿಲ್ಲ. ಮೃತ ಮಗು ಅಮಿಷಾ ಗೊತ್ತಿಲ್ಲ.
2. ಮೃತ ಮಗು ಅಮಿಷಾ ಯಾರೆಂದು ನನಗೆ ಗೊತ್ತಿಲ್ಲ. ಆಕೆ ಎಲ್ಲಿ, ಹೇಗೆ, ಯಾವ ಕಾರಣಕ್ಕೆ ಯಾರಿಂದ ಮೃತಪಟ್ಟಿತು ಎಂದು ನನಗೆ ಗೊತ್ತಿಲ್ಲ. ಆರೋಪಿ ಮೃತ ಮಗುವಿಗೆ ಏನು ತೊಂದರೆ ಮಾಡಿದ್ದಾನೆ ಎಂದು ನನಗೆ ಗೊತ್ತಿಲ್ಲ. ಸದರಿ ಮಗುವಿನ ಸಾವಿನ ಬಗ್ಗೆ ಆರೋಪಿಯ ವಿರುದ್ಧ ದೂರು ದಾಖಲಾಗಿರುವ ವಿಚಾರ ನನಗೆ ಗೊತ್ತಿಲ್ಲ.
3. ಸಾಕ್ಷಿಗೆ ಎರಡು ದಾಖಲೆಗಳನ್ನು ತೋರಿಸಲಾಗಿ ಅವುಗಳಲ್ಲಿರುವ ತನ್ನ ಸಹಿಗಳನ್ನು ನೋಡಿ ಗುರುತಿಸಿರುತ್ತಾರೆ. ಸದರಿ ದಾಖಲೆಗಳು

ದಿನಾಂಕ 04.08.2019 ರಂದು ಶವ ಪಂಚನಾಮೆಗೆ ಸಹಕರಿಸುವಂತೆ ಪೊಲೀಸರು ನೀಡಿದ್ದಾರೆ ಎಂದು ಹೇಳಲಾದ ನೋಟೀಸು ಮತ್ತು ಅದೇ ದಿನ ಪೊಲೀಸರು ಜರುಗಿಸಿದ್ದಾರೆ ಎಂದು ಹೇಳಲಾದ ಪಂಚನಾಮೆಯಾಗಿದ್ದು ಅವುಗಳನ್ನು ಈಗಾಗಲೇ ಕ್ರಮವಾಗಿ ನಿಪಿ.43 ಮತ್ತು 44 ಎಂದು ಗುರುತಿಸಲಾಗಿದ್ದು ಅವುಗಳಲ್ಲಿರುವ ಸಾಕ್ಷಿಯ ಸಹಿಗಳನ್ನು ನಿಪಿ.43(ಬಿ) ಮತ್ತು 44(ಬಿ) ಎಂದು ಗುರುತಿಸಲಾಯಿತು.

4. ಸದರಿ ಸಹಿಗಳನ್ನು ಈಗ್ಗೆ ಸುಮಾರು ವರ್ಷಗಳ ಹಿಂದೆ ಪೊಲೀಸರು ಹೇಳಿದ ಮೇರೆಗೆ ಮಾಡಿದ್ದೇನೆ. ಆದರೆ ಎಲ್ಲಿ, ಯಾವ ವಿಚಾರಕ್ಕೆಂದು ನನಗೆ ಗೊತ್ತಿಲ್ಲ. ನನ್ನನ್ನು ಹೊರತುಪಡಿಸಿ ಸದರಿ ದಾಖಲೆಗೆ ಬೇರೆ ಯಾರೆಲ್ಲಾ ಸಹಿ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ಪಂಚನಾಮೆಗೆ ಸಹಕರಿಸುವಂತೆ ಯಾವುದೇ ನೋಟೀಸನ್ನು ಜಾರಿ ಮಾಡಿಲ್ಲ ಮತ್ತು ಯಾವುದೇ ಪಂಚನಾಮೆಯನ್ನು ಜರುಗಿಸಿಲ್ಲ.

5. ಸಾಕ್ಷಿಯು ಈಗಾಗಲೇ ನಿಪಿ.2 ಎಂದು ಗುರುತಿಸಲಾಗಿರುವ ಫೋಟೋದಲ್ಲಿ ತನ್ನ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ.

6. ಸಾಕ್ಷಿಯು ಈಗಾಗಲೇ ನಿಪಿ.21 ಎಂದು ಗುರುತಿಸಲಾಗಿರುವ ಪಂಚನಾಮೆಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಅದನ್ನು ನಿಪಿ.21(ಸಿ) ಎಂದು ಗುರುತಿಸಲಾಯಿತು.

ಸದರಿ ಪಂಚನಾಮೆಗೆ ಸಹಕರಿಸುವಂತೆ ಪೊಲೀಸರು ನೀಡಿದ್ದಾರೆ ಎಂದು ಹೇಳಲಾದ ನೋಟೀಸಿನಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಸದರಿ ನೋಟೀಸನ್ನು ಈಗಾಗಲೇ ನಿಪಿ.39 ಎಂದು ಗುರುತಿಸಲಾಗಿದ್ದು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.39(ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಗಳನ್ನು ಎಲ್ಲಿ, ಯಾವ ವಿಚಾರಕ್ಕೆ ಯಾವಾಗ ಮಾಡಿದ್ದೇನೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆಯನ್ನು ಜರುಗಿಸಿಲ್ಲ ಮತ್ತು ಯಾವುದೇ ಮಗುವಿನ ಮೃತದೇಹವನ್ನು ಹೊರತೆಗೆದು ಅದರ ತೊಡೆಯ ಮೂಳೆಯನ್ನು ಅಮಾನತುಪಡಿಸಿಕೊಂಡಿಲ್ಲ. ಅವುಗಳಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಅಭಿಯೋಜಕರು ಅನುಮತಿ ಕೇಳಿರುತ್ತಾರೆ ದಾಖಲೆಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು)

<u>ಪಾಟೀ ಸವಾಲುಃ ಸರ್ಕಾರಿ ಅಭಿಯೋಜಕರಿಂದಃ-</u>

7. ದಿನಾಂಕ 04.08.2019 ರಂದು ಚಿಕ್ಕಮಗಳೂರು ಜಿಲ್ಲಾ ಆಸ್ಪತ್ರೆಯಲ್ಲಿ ಚಾಸಾ.7 ರವರ ಮಗಳಾದ ಮೃತ ಅಮಿಷಾಳ ಶವ ಪಂಚನಾಮೆಗೆ ಸಹಕರಿಸುವಂತೆ ಪೊಲೀಸರು ನಿಪಿ.43 ರಂತೆ ನೋಟೀಸನ್ನು ನನಗೆ ಜಾರಿ ಮಾಡಿದ್ದರು ಎಂದರೆ ಸರಿಯಲ್ಲ. ಅದರ ಮೇರೆಗೆ ನಾನು ಸದರಿ ಶವಾಗಾರದಲ್ಲಿ ಹಾಜರಿದ್ದೆನು ಎಂದರೆ ಸರಿಯಲ್ಲ. ಆಗ ಪೊಲೀಸರು ನನ್ನ ಮತ್ತು ಸಹ ಪಂಚರಾದ ಚಾಸಾ.4 ಮತ್ತು 5 ರವರ ಸಮಕ್ಷಮ ನಿಪಿ.44 ರಂತೆ

ಮಗು ಮೃತ ಅಮಿಷಾಳ ಮೃತ ದೇಹದ ಮೇಲೆ ಪಂಚನಾಮೆಯನ್ನು ಜರುಗಿಸಿದ್ದಾರೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ಪಂಚಾಯ್ತಿದಾರರಾದ ನಾವು ದಿನಾಂಕ 04.08.2019 ರಂದು ಮಧ್ಯ ರಾತ್ರಿ 12.00 ರಿಂದ 1.00 ಗಂಟೆ ಸಮಯದಲ್ಲಿ ಆರೋಪಿ ಯಾವುದೋ ಆಟೋದಲ್ಲಿ ಚಾಸಾ.7 ರವರ ಮನೆಗೆ ಹೋಗಿ ಚಾಸಾ.7 ರವರಿಗೆ ಏನನ್ನೋ ಕುಡಿಸಿ ಆಕೆಗೆ ಪ್ರಜ್ಞೆ ಇಲ್ಲದಂತಾದಾಗ ಆರೋಪಿ ಯಾವುದೋ ರೀತಿಯಲ್ಲಿ ಮಗುವನ್ನು ಕೊಲೆ ಮಾಡಿ ಹೋಗಿರುವುದಾಗಿ ಅಭಿಪ್ರಾಯಪಟ್ಟಿರುತ್ತೇವೆ ಎಂದರೆ ಸರಿಯಲ್ಲ. ಆ ಬಗ್ಗೆ ಪೊಲೀಸರಿಗೆ ಹೇಳಿಕೆಯನ್ನು ನೀಡಿದ್ದೇನೆ ಎಂದರೆ ಸರಿಯಲ್ಲ. ಸದರಿ ಸಾಕ್ಷಿಯ ಹೇಳಿಕೆಯನ್ನು ನಿಪಿ.45 ಎಂದು ಗುರುತಿಸಲಾಯಿತು.

8. ದಿನಾಂಕ 10.08.2019 ರಂದು ಪೊಲೀಸರು ರಾಮನಹಳ್ಳಿಯಲ್ಲಿರುವ ಮುಸ್ಲಿಂ ಸ್ಮಶಾನದಲ್ಲಿ ಪಂಚನಾಮೆಗೆ ಸಹಕರಿಸುವಂತೆ ನಿಪಿ.39 ರಂತೆ ನೋಟೀಸನ್ನು ಜಾರಿ ಮಾಡಿದ್ದರು ಎಂದರೆ ಸರಿಯಲ್ಲ. ಅದರ ಮೇರೆಗೆ ನಾನು ಸದರಿ ಸ್ಮಶಾನದಲ್ಲಿ ಹಾಜರಿದ್ದೆನು ಎಂದರೆ ಸರಿಯಲ್ಲ. ಆಗ ಸದರಿ ಸ್ಥಳದಲ್ಲಿ ಪೊಲೀಸರು ನನ್ನ ಮತ್ತು ಸಹ ಪಂಚರಾದ ಚಾಸಾ.3, ಚಾಸಾ.14 ಮತ್ತು ಚಾಸಾ.15, ತಹಶೀಲ್ದಾರ್ ರವರಾದ ಚಾಸಾ.13 ರವರು ಮತ್ತು ವೈದ್ಯರಾದ ಚಾಸಾ.19 ರವರು ಹಾಜರಿದ್ದರು ಎಂದರೆ ಸರಿಯಲ್ಲ. ಸದರಿ ಸ್ಮಶಾನದಲ್ಲಿ ದಫನ್

ಮಾಡಲಾಗಿದ್ದ ಮಗು ಅಮಿಷಾಳ ನಿಜವಾದ ತಂದೆ ಯಾರು ಎಂದು ತಿಳಿಯಲು ಆಕೆಯ ಬಲತೊಡೆಯ ಮೂಳೆಯನ್ನು ಸಂಗ್ರಹಿಸುವ ಸಲುವಾಗಿ ಆಕೆಯ ಶವವನ್ನು ದಫನ್ ಮಾಡಿದ ಸ್ಥಳದಿಂದ ಹೊರತೆಗೆದು ಸ್ಥಳದಲ್ಲಿ ಹಾಜರಿದ್ದ ಚಾಸಾ.19 ರವರು ಮಗುವಿನ ಬಲಗಾಲಿನ ತೊಡೆಯ ಮೂಳೆಯನ್ನು ಶೇಖರಿಸಿಕೊಂಡು ನಂತರ ನನ್ನ ಮತ್ತು ಸಹ ಪಂಚನಾದ ಚಾಸಾ.11 ಮತ್ತು ಚಾಸಾ.13 ರವರ ಸಮಕ್ಷಮ ಮಗುವಿನ ಶವವನ್ನು ದಫನ್ ಮಾಡಿ ಆ ಬಗ್ಗೆ ನಿಪಿ.21 ರಂತೆ ಪಂಚನಾಮೆಯನ್ನು ಜರುಗಿಸಲಾಯಿತು ಎಂದರೆ ಸರಿಯಲ್ಲ.

9. ಪ್ರಕರಣದ ಬಗ್ಗೆ ಮಾಹಿತಿ ಇದ್ದರೂ ಸಹ ಆರೋಪಿಯೊಂದಿಗೆ ಶಾಮೀಲಾಗಿ ಅವನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೀರಿ ಎಂದರೆ ಸರಿಯಲ್ಲ.

<u>ಪಾಟೀ ಸವಾಲು: ಆರೋಪಿತರ ಪರ ವಕೀಲರು ಸಾಕ್ಷಿಯ ಪಾಟೀ ಸವಾಲು ಇಲ್ಲವೆಂದು ನುಡಿದಿರುತ್ತಾರೆ.</u>

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯ್ತು)

ಓ.ಹೇ.ಕೇ.ಸ.ಇ.ಎ.ಒ.

ಸಹಿ/-
(ಭಾನುಮತಿ ಬಿ.ಸಿ)
2 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿಕ್ಕಮಗಳೂರು.

ಸಾಕ್ಷಿಯ ಸಹಿ

ಹೇಮಾ.